ಆ) ಹಾಗಿದ್ದಲ್ಲಿ, ಈ ಪ್ರಸ್ತಾವವು ಜಾರಿಗೆ ಬಂದರೆ ಸುಮಾರು 10 ಸಾವಿರ ಬಡ ಮೀನುಗಾರರ ಕುಟುಂಬಗಳು ನಿರ್ಗತಿಕರಾಗುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಈ ಬಡ ಕುಟುಂಬಗಳ ರಕ್ಷಣೆಗೆ ಸರ್ಕಾರ ಕೈಗೊಂಡಿರುವ ಕ್ರಮಗಳು ಯಾವುವು;

ಈ) ಬೆಂಗಳೂರು ನಗರದ ಸುತ್ತಮುತ್ತಲಿನ ಕೆರೆಗಳಲ್ಲಿ ಮೀನು ಪಾಶುವಾರು ಹಕ್ಕನ್ನು ಸ್ಥಳೀಯರಿಗೆ ನೀಡುವಂತಹ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ?

ಶ್ರೀ ಎನ್. ಧರ್ಮಸಿಂಗ್ (ಮುಖ್ಯಮಂತ್ರಿಗಳು)

ಅ) ಬೆಂಗಳೂರು (ನಗರ) ಜಿಲ್ಲೆಯಲ್ಲಿನ ಆಯ್ದ 14 ಕೆರೆಗಳ ಸರ್ವತೋಮುಖ ಅಭಿವೃದ್ಧಿ ಮತ್ತು ನಿರ್ವಹಣೆಗಾಗಿ ಸರ್ಕಾರವು ಅವುಗಳನ್ನು ಕೆರೆ ಅಭಿವೃದ್ಧಿ ಪ್ರಾಧಿಕಾರದ ಆಡಳಿತಾತ್ಮಕ ನಿಯಂತ್ರಣದಲ್ಲಿಟ್ಟಿರುತ್ತವೆ.

ಸದರಿ ಕೆರೆಗಳ ಮೀನು ಪಾಶುವಾರು ಹಕ್ಕನ್ನು ಮೀನುಗರಿಕೆ ಇಲಾಖೆಯಿಂದ ಕೆರೆ ಅಭಿವೃದ್ಧಿ ಪ್ರಾಧಿಕಾರಕ್ಕೆ ವರ್ಗಾಯಿಸುವ ಬಗ್ಗೆ ಸರ್ಕಾರವು ಇನ್ನೂ ತೀರ್ಮಾನವನ್ನು ಕೈಗೊಂಡಿರುವುದಿಲ್ಲ.

ಆ) ಉದ್ಭವಿಸುವುದಿಲ್ಲ.

ಇ) ಉದ್ಭವಿಸುವುದಿಲ್ಲ.

ಈ) ಮೀನು ಪಾಶುವಾರು ಹಕ್ಕಿನ ಗುತ್ತಿಗೆಯನ್ನು ನೀಡುವ ಇಲಾಖೆಯು ನಿಯಮಾವಳಿಯನ್ವಯ ಸಂಘ, ಸಂಸ್ಥೆ ಹಾಗೂ ಖಾಸಗಿಯವರಿಗೆ ಆದ್ಯತೆಯ ಮೇರೆಗೆ ಕೆರೆಗಳ ಮೀನು ಪಾಶುವಾರು ಹಕ್ಕನ್ನು ವಿಲೇಗೊಳಿಸಲಾಗುತ್ತಿದೆ.

254 (637) : ಶ್ರೀ ಜೀವರಾಜ್ ಡಿ.ಎನ್. (ಶೃಂಗೇರಿ) ಮಾನ್ಯ ಜಲ ಸಂಪನ್ಮೂಲ ಮತ್ತು ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ನರಸಿಂಹರಾಜಪುರ ತಾಲ್ಲೂಕು ಕಡುಹಿನ ಬೈಲು ಏತ ನೀರಾವರಿ ಯೋಜನೆಯ ಅಂದಾಜು ವೆಚ್ಚ ಎಷ್ಟು?

ಆ) ಈ ಯೋಜನೆಯ ಶಂಕು ಸ್ಥಾಪನೆಯನ್ನು ಈಗಾಗಲೇ ಮಾಡಲಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಇ) ಈ ಯೋಜನೆಯ ಕಾಮಗಾರಿ ಆರಂಭಗೊಂಡಿದೆಯೇ?

ಈ) ಇದುವರೆಗೆ ಖರ್ಚು ಮಾಡಿದ ಹಣ ಎಷ್ಟು?

ಉ) ಯೋಜನೆಯ ಕಾಮಗಾರಿ ಆರಂಭಗೊಳ್ಳದಿದ್ದಲ್ಲಿ ಕಾರಣಗಳೇನು?

ಊ) ಯಾವಾಗ ಹಣ ಬಿಡುಗಡೆ ಮಾಡಲಾಗುವುದು?

ಋ) ಈ ಯೋಜನೆಗೆ ಮಂಜೂರಾತಿ ದೊರೆಯದ್ದಿದ್ದಲ್ಲಿ ಶಂಕು ಸ್ಥಾಪನೆ ಮಾಡಿರುವುದು ಸರಿಯೇ ಹಾಗೂ ಇದರಲ್ಲಿ ಸಹಕರಿಸಿದ ಅಧಿಕಾರಿಗಳ ಮೇಲೆ ಸರ್ಕಾರ ಕ್ರಮ ಕೈಗೊಳ್ಳುವುದೇ?

ಶ್ರೀ ಎಂ. ಮಲ್ಲಿಕಾರ್ಜುನ ಖರ್ಗೆ (ಜಲ ಸಂಪನ್ಮೂಲ ಮತ್ತು ಸಾರಿಗೆ ಸಚಿವರು)

ಅ) ರೂ. 690 ಲಕ್ಷಗಳು

ಆ) ಬಂದಿದೆ.

ಇ) ಇಲ್ಲ.

ಈ) ಇದುವರೆಗೆ ಯಾವುದೇ ಹಣ ಖರ್ಚು ಮಾಡಿರುವುದಿಲ್ಲ.

ಉ) ಸ್ಥಳೀಯರ ಬೇಡಿಕೆಗಳಿಗೆ ಸ್ಪಂದಿಸಿ ಮೂಲ ಪ್ರಸ್ತಾವನೆಯನ್ನು ಮಾರ್ಪಡಿಸಿ ಹಾಗೂ ಪರಿಷ್ಕರಿಸುವ ಪ್ರಕ್ರಿಯೆಯಲ್ಲಿನ ವಿಳಂಬದಿಂದಾಗಿ ಯೋಜನೆಯ ಕಾಮಗಾರಿಯನ್ನು ಪ್ರಾರಂಭಿಸಿರುವುದಿಲ್ಲ.

ಊ) 2005–06ನೇ ಸಾಲಿನ ಆರ್ಥಿಕ ವರ್ಷದಲ್ಲಿ ಯೋಜನೆಗೆ ಅನುದಾನವನ್ನು ಒದಗಿಸಿಕೊಳ್ಳಲು ಪ್ರಯತ್ನಿಸಲಾಗುವುದು.

ಋ) ಯೋಜನೆಗೆ ತಾತ್ವಿಕ ಒಪ್ಪಿಗೆ ನೀಡಿರುವುದರಿಂದ ಶಂಕು ಸ್ಥಾಪನೆ ನೆರವೇರಿಸಿದ್ದು ಅಧಿಕಾರಿಗಳ ಮೇಲೆ ಕ್ರಮ ಕೈಗೊಳ್ಳುವ ಪ್ರಶ್ನೆ ಉದ್ಭವಿಸುವುದಿಲ್ಲ.

255 (638) : ಶ್ರೀ ಜೀವರಾಜ್ ಡಿ.ಎನ್. (ಶೇಂಗೇರಿ) ಮಾನ್ಯ ಜಲಸಂಪನ್ಮೂಲ ಮತ್ತು ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರೈಲ್ವೆ ಹಾಗೂ ಬಸ್ ನಿಲ್ದಾಣಗಳಲ್ಲಿರುವ ರಿಸರ್ವ ಪಾವತಿ ಆಟೋರಿಕ್ಷಾ ಕೌಂಟರ್‌ಗಳು ಪ್ರಮುಖ ವೇಳೆಗಳಲ್ಲಿ ಅದರಲ್ಲೂ ಬೆಳಗಿನ ಜಾವಗಳಲ್ಲಿ ಮುಚ್ಚಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಇದರಿಂದ ಆಟೋರಿಕ್ಷಾದವರು ದುಬಾರಿ ದರ ಬೇಡುತ್ತಿರುವುದು ಸಹ ಸರ್ಕಾರದ ಗಮನಕ್ಕೆ ಬಂದಿದೆಯೇ?

ಇ) ಹೆಚ್ಚಿನ ಆಟೋರಿಕ್ಷಾಗಳ ಮೀಟರ್ ದುಬಾರಿ ದರ ತೋರಿಸುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಈ) ಎಲ್ಲಾ ಮೇಲ್ಕಂಡ ವಿಷಯದ ಬಗ್ಗೆ ಸರ್ಕಾರವು ಎಂದು ಮತ್ತು ಯಾವ ರೀತಿಯ ಕ್ರಮಕೈಗೊಳ್ಳಲಿದೆ?

ಉ) ಈ ರೀತಿ ದೇಶದ ಎಲ್ಲಾ ಭಾಗಗಳಿಂದ ಬರುವ ಪ್ರಯಾಣಿಕರಿಗೆ ತೊಂದರೆಯಾಗುವುದರಿಂದ ಬೆಂಗಳೂರು ನಗರದ ಬಗ್ಗೆ ಕೆಟ್ಟ ಅಭಿಪ್ರಾಯ ಬರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಶ್ರೀ ಮಲ್ಲಿಕಾರ್ಜುನ ಖರ್ಗೆ (ಜಲಸಂಪನ್ಮೂಲ ಮತ್ತು ಸಾರಿಗೆ ಸಚಿವರು)

ಅ) ಇಲ್ಲ.

ಆ) ಇಲ್ಲ.

ಇ) ಇಲ್ಲ.

ಈ) ಸಾರಿಗೆ ಇಲಾಖೆಯು ಬೆಂಗಳೂರು ನಗರದಲ್ಲಿ ಕಾನೂನು ಮಾಪನ ಇಲಾಖೆ (ಕಂಟ್ರೋಲರ್ ಆಫ್ ವೇಯ್ಟ್ಸ್ ಅಂಡ್ ಮೆಷರ್ಸ್) ಮತ್ತು ಪೊಲೀಸ್ ಇಲಾಖೆಯ ಸಹಯೋಗದೊಂದಿಗೆ ತಪಾಸಣಾ ಕಾರ್ಯವನ್ನು ಹಮ್ಮಿಕೊಂಡು ಆಟೋರಿಕ್ಷಾಗಳಲ್ಲಿ ನಿಗದಿತ ದರಕ್ಕಿಂತ ಹೆಚ್ಚಿಗೆ ದರವನ್ನು ವಸೂಲಿಸುವಂತಹ ಹಾಗೂ ಮೀಟರ್‌ಗಳನ್ನು ಟ್ಯಾಂಪರ್ ಮಾಡಿಕೊಂಡು